I/519506/2023

**ಕರ್ನಾಟಕ ಸರ್ಕಾರ**
**ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಕರ್ನಾಟಕ ಹಾಗೂ ಆಯ್ಕೆ ಪ್ರಾಧಿಕಾರ, ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

# ಅಧಿಸೂಚನೆ

**ಸಂಖ್ಯೆ: KFD/HOFF/B9(RCT)/3/2022-PnR-KFD, ದಿನಾಂಕ: 17.11.2023**

## 2023-24ನೇ ಸಾಲಿನಲ್ಲಿ 540 ಗಸ್ತು ಅರಣ್ಯ ಪಾಲಕ (ವೃಂದ ಮತ್ತು ನೇಮಕಾತಿ ನಿಯಮಗಳಂತೆ 'ಅರಣ್ಯ ರಕ್ಷಕ') ಗ್ರೂಪ್ 'ಸಿ' ಹುದ್ದೆಗಳಿಗೆ ನೇರ ನೇಮಕಾತಿ

## ತಿದ್ದುಪಡಿ

ಸದರಿ ಅಧಿಸೂಚನೆಯ ಕಂಡಿಕೆ 4ನ್ನು ಭಾಗಶಃ ಮಾರ್ಪಡಿಸಿದ್ದು, ಸದರಿ ಕಂಡಿಕೆಯನ್ನು ಈ ಕೆಳಗಿನಂತೆ ಓದಿಕೊಳ್ಳತಕ್ಕದ್ದು.

**4. ವಿದ್ಯಾರ್ಹತೆ:**

ಅಭ್ಯರ್ಥಿಯು ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ **ಪಿ.ಯು.ಸಿ.** ವಿದ್ಯಾರ್ಹತೆ **ಅಥವಾ** ಪಿ.ಯು.ಸಿ. ವಿದ್ಯಾರ್ಹತೆಯ **ತತ್ಸಮಾನ** ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ಈ ಮೇಲೆ ನಿಗಧಿಪಡಿಸಿದ ಪ್ರಾರಂಭಿಕ ದಿನಾಂಕಕ್ಕೆ ಹೊಂದಿರಬೇಕು.

***ವಿಶೇಷ ಸೂಚನೆ:***

*(1) ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017 ದಿನಾಂಕ: 27.02.2018ರಲ್ಲಿ ಸ್ಪಷ್ಟಪಡಿಸಿರುವ ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು ಈ ಕೆಳಗಿನಂತಿವೆ:*

*(a) ಸಿ.ಬಿ.ಎಸ್.ಇ. ಮತ್ತು ಐ.ಸಿ.ಎಸ್.ಇ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ;* ***ಅಥವಾ***

*(b) ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ;* ***ಅಥವಾ***

*(c) ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್.) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.;* ***ಅಥವಾ***

*(d) ಎರಡು ವರ್ಷಗಳ ಐ.ಟಿ.ಐ. ಕೋರ್ಸ್* ***ಅಥವಾ*** *ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ./ಜೆ.ಓ.ಡಿ.ಸಿ./ಜೆ.ಎಲ್.ಡಿ.ಸಿ.) ಅಭ್ಯರ್ಥಿಗಳು* ***ಎನ್.ಐ.ಓ.ಎಸ್. ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ)*** *ಅಥವಾ* ***ಪದವಿಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ*** *ಪಿ.ಯು.ಸಿ. ಗೆ ತತ್ಸಮಾನವೆಂದು ಪರಿಗಣಿಸಬಹುದು.*

*(2) ಸರ್ಕಾರದ ಆದೇಶ ಸಂಖ್ಯೆ: ಇಪಿ 33 ಟಿಪಿಇ 2021 ದಿನಾಂಕ: 30.09.2021ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ. ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸುವ ಬಗ್ಗೆ ಈ ಕೆಳಕಂಡಂತೆ ಆದೇಶಿಸಲಾಗಿದೆ:*

*"......... ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ. ವಿದ್ಯಾರ್ಹತೆಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.*

*1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸುವುದು.*

I/519506/2023

*2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ. ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು."*

*(3) ಮೇಲೆ ನಮೂದಿಸಿರುವ ವಿದ್ಯಾರ್ಹತೆಯನ್ನು ಹೊಂದದೇ ಇರುವ* ***ಅಥವಾ*** *ಇತರೆ ಕಾರಣಗಳಿಂದ ಅನರ್ಹರಿರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಜಿ ಸಲ್ಲಿಸಿ, ಯಾವುದೇ ಕಾರಣದಿಂದ ಭಾಗವಹಿಸಿದಲ್ಲಿ, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಅಂಕಪಟ್ಟಿ ಹೊಂದಿರುವುದಿಲ್ಲವೆಂದು* ***ಅಥವಾ*** *ಇತರೆ ಕಾರಣಗಳಿಂದ ಅನರ್ಹರಿರುವುದು ಆಯ್ಕೆ ಪ್ರಾಧಿಕಾರ/ ನೇಮಕಾತಿ ಪ್ರಾಧಿಕಾರಕ್ಕೆ ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳ ಅಭ್ಯರ್ಥಿತ್ವವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು ಹಾಗೂ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದೇನೆ ಎಂಬ ಕಾರಣಕ್ಕಾಗಿ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದಿರುವುದಿಲ್ಲ. ಈ ಕುರಿತು ಆಯ್ಕೆ ಪ್ರಾಧಿಕಾರ/ ನೇಮಕಾತಿ ಪ್ರಾಧಿಕಾರ ತೆಗೆದುಕೊಳ್ಳುವ ನಿರ್ಣಯವೇ ಅಂತಿಮವಾಗಿರುತ್ತದೆ.*

*(4) ಸರ್ಕಾರದ ಪತ್ರ ಸಂಖ್ಯೆ: ಅಪಜೀ 249 ಅಅಸೇ 2022 ದಿನಾಂಕ: 19.04.2023ರಲ್ಲಿ "...................... ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಸಿಆಸುಇ 121 ಸೇವನೇ 2021, ದಿನಾಂಕ: 28.11.2022ರ ಆದೇಶದನ್ವಯ ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನೇಮಿಸಿದ್ದ ಸಮಿತಿಯು ನೀಡಿರುವ ವರದಿಯನುಸಾರ* ***ಕೆಎಸ್‌ಓಯು ನಡೆಸುವ ಬ್ರಿಡ್ಜ್ ಕೋರ್ಸ್ ಪದವಿ ಪೂರ್ವ ಶಿಕ್ಷಣದ ದ್ವಿತೀಯ ಪಿಯುಸಿ ಗೆ ತತ್ಸಮಾನವಾಗಿರುವುದಿಲ್ಲವೆಂದು*** *" ತಿಳಿಸಲಾಗಿರುತ್ತದೆ.*

*(5) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕದಂದು ನಿಗದಿತ ವಿದ್ಯಾರ್ಹತೆಯ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ನಿಗದಿತ ವಿದ್ಯಾರ್ಹತೆಯ ಅಂಕಪಟ್ಟಿ ಹೊಂದಿಲ್ಲದೇ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.*

*(6) ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಪ್ರವರ್ಗದಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಆನ್‌ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಅರ್ಜಿ ಸಲ್ಲಿಸುವ ವೇಳೆ* ***ಪರಿಶಿಷ್ಟ ಜಾತಿ - ಸ್ಥಳೀಯ ಅರಣ್ಯ ಬುಡಕಟ್ಟು ಪರಿಶಿಷ್ಟ ಪಂಗಡ [Local Forest Dwelling Tribes] ಮೀಸಲಾತಿ ಅಂಕಣವನ್ನು ಎಚ್ಚರಿಕೆ ವಹಿಸಿ ಭರ್ತಿ ಮಾಡುವುದು. ತಪ್ಪಿದ್ದಲ್ಲಿ, ಈ ಬಗ್ಗೆ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ.***

Signed by
Brijesh Kumar Dikshit
Date: 01-12-2023 18:29:11

ದಿನಾಂಕ: 01.12.2023

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು), ಕರ್ನಾಟಕ ಹಾಗೂ
**ಆಯ್ಕೆ ಪ್ರಾಧಿಕಾರ**